**All India Radio: Bangalore**
**National Bulletin In Kannada**
**08.03.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**08.03.2026 1.10 p.m.**

**<><><><>**

ಮುಖ್ಯಾಂಶಗಳು

1. ಇಂದು ಅಂತಾರಾಷ್ಟ್ರೀಯ ಮಹಿಳಾ ದಿನ; ಸಮಸ್ತ ಮಹಿಳಾ ಸಮುದಾಯಕ್ಕೆ ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಶುಭಾಶಯ
2. ನವದೆಹಲಿಯಲ್ಲಿ ಇಂದು ಜಿಪಿಆರ್‌ಎ ಕ್ವಾರ್ಟರ್ಸ್‌ಗಳ ಕೀಲಿಕೈಗಳನ್ನು ಮಹಿಳಾ ಫಲಾನುಭವಿಗಳಿಗೆ ಹಸ್ತಾಂತರಿಸಿದ ಪ್ರಧಾನಿ ನರೇಂದ್ರ ಮೋದಿ
3. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಫೈನಲ್‌ನಲ್ಲಿ ಇಂದು ಭಾರತ- ನ್ಯೂಜಿಲೆಂಡ್ ಮುಖಾಮುಖಿ; ಸತತ ಎರಡನೇ ಬಾರಿಗೆ ಚಾಂಪಿಯನ್ ಪಟ್ಟ ಮುಡಿಗೇರಿಸಿಕೊಳ್ಳುವ ತವಕದಲ್ಲಿ ಭಾರತ
4. ಆಲ್ ಇಂಗ್ಲೆಂಡ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್; ಫೈನಲ್‌ನಲ್ಲಿಂದು ಭಾರತದ ಲಕ್ಷ್ಯ ಸೇನ್, ಚೈನೀಸ್ ತೈಪೆಯ ಲಿನ್ ಚುನ್-ಯಿ ನಡುವೆ ಹಣಾಹಣಿ

<><><><>

ಇಂದು ಅಂತಾರಾಷ್ಟ್ರೀಯ ಮಹಿಳಾ ದಿನ. ಈ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಶುಭಾಶಯ ಕೋರಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ವಿದ್ಯಾವಂತ ಮತ್ತು ಸಬಲೀಕರಣಗೊಂಡ ಮಹಿಳೆಯರು ಪ್ರಗತಿಪರ ರಾಷ್ಟ್ರದ ಆಧಾರಸ್ತಂಭಗಳು ಎಂದು ಹೇಳಿದ್ದಾರೆ. ಪ್ರತಿಯೊಬ್ಬ ಮಹಿಳೆಯೂ ಘನತೆ, ಸುರಕ್ಷತೆ ಮತ್ತು ಸ್ವಾತಂತ್ರ್ಯದೊಂದಿಗೆ ಬೆಳೆಯಲು ಮತ್ತು ಬದುಕಲು ಸಮಾನ ಅವಕಾಶಗಳನ್ನು ಹೊಂದಿರುವ ಸಮಾಜವನ್ನು ನಿರ್ಮಿಸಲು ಸಾಮೂಹಿಕ ಬದ್ಧತೆಯನ್ನು ಪುನರುಚ್ಚರಿಸಬೇಕು ಎಂದು ರಾಷ್ಟ್ರಪತಿ ಮುರ್ಮು ನಾಗರಿಕರನ್ನು ಒತ್ತಾಯಿಸಿದ್ದಾರೆ. ಭಾರತದ ದೀರ್ಘ ಮತ್ತು ಶ್ರೇಷ್ಠ ಇತಿಹಾಸದುದ್ದಕ್ಕೂ ಮಹಿಳೆಯರು ಧೈರ್ಯ, ಬುದ್ಧಿವಂತಿಕೆ ಮತ್ತು ಸಹಾನುಭೂತಿಯ ಜ್ಯೋತಿ ಹೊತ್ತವರು ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ಪ್ರಾಚೀನ ಜ್ಞಾನ ಸಂಪ್ರದಾಯಗಳ ರಕ್ಷಕರಿಂದ ಹಿಡಿದು

ಸ್ವಾತಂತ್ರ್ಯ ಚಳವಳಿಯ ಧೈರ್ಯಶಾಲಿ ನಾಯಕಿಯರವರೆಗೆ ಮಹಿಳೆಯರು ರಾಷ್ಟ್ರವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ತಿಳಿಸಿದ್ದಾರೆ. ದೇಶದ ನಾರಿ ಶಕ್ತಿಯ ಸಾಧನೆಗಳು, ಹೆಮ್ಮೆಯ ಮೂಲ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಪರಿವರ್ತನಾತ್ಮಕ ಪಾತ್ರ ಪ್ರಬಲವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಪ್ರತಿಯೊಂದು ಕ್ಷೇತ್ರದಲ್ಲೂ ಮಹಿಳೆಯರು, ದೃಢನಿಶ್ಚಯ, ಸೃಜನಶೀಲತೆ ಮತ್ತು ಸಾಟಿಯಿಲ್ಲದ ಉತ್ಸಾಹ ದೇಶದ ಪ್ರಗತಿಯನ್ನು ರೂಪಿಸುತ್ತಿದ್ದು, ವಿಕಸಿತ ಭಾರತವನ್ನು ನಿರ್ಮಿಸುವ ಸರ್ಕಾರದ ಸಾಮೂಹಿಕ ಸಂಕಲ್ಪವನ್ನು ಬಲಪಡಿಸುತ್ತದೆ ಎಂದು ಪ್ರಧಾನಿ ತಿಳಿಸಿದ್ದಾರೆ.

ಸಮಾಜದಲ್ಲಿ ನಾರಿ ಶಕ್ತಿ ವಹಿಸುವ ಅಪ್ರತಿಮ ಪಾತ್ರಕ್ಕೆ ಮಾನವಕುಲವು ಋಣಿಯಾಗಿದೆ. ಪೀಳಿಗೆಗಳನ್ನು ಪೋಷಿಸುವ ಮತ್ತು ವೈಜ್ಞಾನಿಕ ಹಾಗೂ ಆರ್ಥಿಕ ಪ್ರಗತಿಯನ್ನು ಮುನ್ನಡೆಸುವ ಮೂಲಕ, ಮಹಿಳೆಯರು ಪ್ರತಿಯೊಬ್ಬರ ಜೀವನದಲ್ಲೂ ಕೊಡುಗೆ ನೀಡಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

<><><><>

ಮಹಿಳೆಯರಿಗೆ ಅವಕಾಶಗಳು ಮತ್ತು ಬೆಂಬಲ ನೀಡಿದಾಗ, ಅವರು ಪ್ರತಿಯೊಂದು ಕ್ಷೇತ್ರದಲ್ಲೂ ಶ್ರೇಷ್ಠತೆಯನ್ನು ಸಾಧಿಸಬಹುದು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂದರ್ಭದಲ್ಲಿ ನಡೆದ ರಾಷ್ಟ್ರೀಯ ಮಟ್ಟದ ಆಚರಣೆಯನ್ನುದ್ದೇಶಿಸಿ ಮಾತನಾಡಿದ ಅವರು, ಉದ್ಯಮಶೀಲತೆಯಾಗಲಿ ಅಥವಾ ಕಾರ್ಪೊರೇಟ್ ಜಗತ್ತಾಗಲಿ ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರು ಮುನ್ನಡೆ ಸಾಧಿಸಿದ್ದಾರೆ. ಭಾರತವು ಮಹಿಳಾ ನೇತೃತ್ವದ ಅಭಿವೃದ್ಧಿಯತ್ತ ವೇಗವಾಗಿ ಸಾಗುತ್ತಿದೆ ಮತ್ತು ಕಾರ್ಯಪಡೆಯಲ್ಲಿ ಮಹಿಳೆಯರ ಭಾಗವಹಿಸುವಿಕೆ ಹೆಚ್ಚಾಗಿದೆ ಎಂದು ಅವರು ಹೇಳಿದರು. 'ಬೇಟಿ ಬಚಾವೋ ಬೇಟಿ ಪಡಾವೋ, ಪ್ರಧಾನ ಮಂತ್ರಿ ಮುದ್ರಾ ಯೋಜನೆ ಮತ್ತು ಮಿಷನ್ ಶಕ್ತಿ ಮುಂತಾದ ಯೋಜನೆಗಳು ಮಹಿಳೆಯರ ಸಬಲೀಕರಣಕ್ಕೆ ಸಹಕಾರಿಯಾಗಿದೆ ಎಂದು ಅವರು ಹೇಳಿದರು. ಶಿಕ್ಷಣದಲ್ಲಿ ಮಹಿಳೆಯರ ಭಾಗವಹಿಸುವಿಕೆ ಹೆಚ್ಚುತ್ತಿದೆ. ದೇಶವು ಶಾಲಾ ಶಿಕ್ಷಣದಲ್ಲಿ ಲಿಂಗ ಸಮಾನತೆಯನ್ನು ಸಾಧಿಸಿದೆ. ದೇಶದ ಹೆಣ್ಣುಮಕ್ಕಳು ಕ್ರೀಡೆಯಲ್ಲೂ ಅಸಾಧಾರಣವಾಗಿ ಉತ್ತಮ ಪ್ರದರ್ಶನ ನೀಡುತ್ತಿದ್ದಾರೆ ಎಂದು ರಾಷ್ಟ್ರಪತಿ ಹೇಳಿದರು.

**ಧ್ವನಿ: ದ್ರೌಪದಿ ಮುರ್ಮು( ೧೬ ಸೆಕೆಂಡ್ಸ್)**

ಬಳಿಕ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಅನ್ನಪೂರ್ಣ ದೇವಿ ಮಾತನಾಡಿ, ಕೇಂದ್ರವು ಮಹಿಳೆಯರ ಜೀವನವನ್ನು ಸಬಲೀಕರಣಗೊಳಿಸಲು ಸಂಪೂರ್ಣ ಸರ್ಕಾರಿ ವಿಧಾನದೊಂದಿಗೆ ಕೆಲಸ ಮಾಡುತ್ತಿದೆ ಎಂದು ಹೇಳಿದರು.

<><><><>

ನವದೆಹಲಿಯ ಸರೋಜಿನಿ ನಗರದಲ್ಲಿರುವ ಜನರಲ್ ಪೂಲ್ ರೆಸಿಡೆನ್ಶಿಯಲ್ ಅಕಾಮಡೇಷನ್-ಜಿಪಿಆರ್‌ಎ ಕ್ವಾರ್ಟರ್ಸ್‌ಗಳ ಕೀಲಿಕೈಗಳನ್ನು ಇಂದು ಪ್ರಧಾನಿ ನರೇಂದ್ರ ಮೋದಿ ಮಹಿಳಾ ಫಲಾನುಭವಿಗಳಿಗೆ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಪ್ರಧಾನಿ, ಶ್ರಮ ಜೀವಿ ಕಾರ್ಮಿಕರೊಂದಿಗೆ ಸಂವಾದ ನಡೆಸಿದರು. ಜಿಪಿಆರ್‌ಎ ಯೋಜನೆಯಡಿಯಲ್ಲಿ ೧೫ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ಯೋಜನೆಗಳನ್ನು ನವೀನ ಸ್ವ-ಸಮರ್ಥನೀಯ ಹಣಕಾಸು ಮಾದರಿಯ ಮೂಲಕ ಮರು ಅಭಿವೃದ್ಧಿಪಡಿಸಲಾಗಿದೆ, ಇದು ಸಾರ್ವಜನಿಕ ಖಜಾನೆಗೆ ಹೊರೆಯಾಗದಂತೆ ಪುನರಾಭಿವೃದ್ಧಿಯನ್ನು ಕೈಗೊಳ್ಳುವುದನ್ನು ಖಚಿತಪಡಿಸುತ್ತದೆ. ಪುನರಾಭಿವೃದ್ಧಿ ಯೋಜನೆಯು, ಸರ್ಕಾರಿ ನೌಕರರಿಗೆ ೯ ಸಾವಿರದ ೩೫೦ ಕ್ಕೂ ಹೆಚ್ಚು ಆಧುನಿಕ ಫ್ಲಾಟ್‌ಗಳನ್ನು ಒದಗಿಸುವುದರ ಜೊತೆಗೆ ಸುಮಾರು ೪೮ ಲಕ್ಷ ಚದರ ಅಡಿ ಕಚೇರಿ ಸ್ಥಳವನ್ನು ಸೃಷ್ಟಿಸುತ್ತದೆ. ಬಳಿಕ ಪ್ರಧಾನಿ ನರೇಂದ್ರ ಮೋದಿ ಸುಮಾರು ೧೮ ಸಾವಿರದ ೩೦೦ ಕೋಟಿ ರೂಪಾಯಿ ಮೌಲ್ಯದ ದೆಹಲಿ ಮೆಟ್ರೋ ಯೋಜನೆಗಳನ್ನು ಉದ್ಘಾಟಿಸಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ, ಈ ವೇಳೆ, ಪ್ರಧಾನಿ ದೆಹಲಿ ಮೆಟ್ರೋದ ಎರಡು ಹೊಸ ಕಾರಿಡಾರ್‌ಗಳನ್ನು ಉದ್ಘಾಟಿಸಲಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇದೇ ೧೯ ರಂದು ಅಯೋಧ್ಯೆಗೆ ಭೇಟಿ ನೀಡಲಿದ್ದಾರೆ, ಅಯೋಧ್ಯೆಯಲ್ಲಿ ಹಿಂದೂ ಹೊಸ ವರ್ಷವನ್ನು ಪ್ರತಿಬಿಂಬಿಸುವ ವಿಶೇಷ ಆಚರಣೆಗಳ ಭಾಗವಾಗಿ ವೈದಿಕ ಆಚರಣೆಗಳು ಸೇರಿದಂತೆ ಧಾರ್ಮಿಕ ಸಮಾರಂಭಗಳ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಲಿದ್ದಾರೆ. ಅರ್ಚಕ ಗಣೇಶ್ವರ್ ಶಾಸ್ತ್ರಿ ಅವರ ಮಾರ್ಗದರ್ಶನದಲ್ಲಿ ದಕ್ಷಿಣ ಭಾರತ, ಕಾಶಿ ಮತ್ತು ಅಯೋಧ್ಯೆಯ ೫೧ ವೈದಿಕರು ಈ ಧಾರ್ಮಿಕ ವಿಧಿ ವಿಧಾನಗಳನ್ನು ನೆರವೇರಿಸಲಿದ್ದಾರೆ. ಈ ಸಂದರ್ಭದಲ್ಲಿ ರಾಷ್ಟ್ರಪತಿ ಮುರ್ಮು ಅವರು, ದೇವಾಲಯದ ನಿರ್ಮಾಣಕ್ಕೆ ಶ್ರಮಿಸಿದ ಸುಮಾರು ೪೦೦ ಕಾರ್ಮಿಕರನ್ನು ಗೌರವಿಸಲಿದ್ದಾರೆ ಮತ್ತು ಪಾರ್ಕೋಟಾ ಎಂದು ಕರೆಯಲ್ಪಡುವ ಹೊರ ಆವರಣದಲ್ಲಿ ಇರುವ ದೇವಾಲಯಗಳಲ್ಲಿ ಒಂದರಲ್ಲಿ ಧ್ವಜಾರೋಹಣ ಮಾಡಲಿದ್ದಾರೆ.

<><><><>

ನೇಪಾಳ ಸಂಸತ್ ಚುನಾವಣೆಯಲ್ಲಿ ಬಾಲೇಂದ್ರ ಶಾ ಅವರ ರಾಷ್ಟ್ರೀಯ ಸ್ವತಂತ್ರ ಪಕ್ಷ-ಆರ್‌ಎಸ್‌ಪಿ ಭರ್ಜರಿ ಗೆಲುವು ಸಾಧಿಸಿ, ಮುಂದಿನ ಸರ್ಕಾರ ರಚಿಸಲು ಸಜ್ಜಾಗಿದೆ. ಆರ್‌ಎಸ್‌ಪಿಯ ೩೫ ವರ್ಷದ ಪ್ರಧಾನಿ ಅಭ್ಯರ್ಥಿ ಬಾಲೆನ್ ಎಂದೇ ಜನಪ್ರಿಯರಾಗಿರುವ ಬಾಲೇಂದ್ರ ಶಾ, ನಾಲ್ಕು ಬಾರಿ ಪ್ರಧಾನಿಯಾಗಿದ್ದ ಸಿಪಿಎನ್-ಯುಎಂಎಲ್ ಪಕ್ಷದ ಕೆ.ಪಿ.ಶರ್ಮಾ ಓಲಿ ಅವರನ್ನು ಝಾಪಾ-೫ ಕ್ಷೇತ್ರದಲ್ಲಿ ೫೦ ಸಾವಿರ ಮತಗಳ ಅಂತರದಿಂದ ಸೋಲಿಸಿದ್ದಾರೆ. ಬಾಲೇಂದ್ರ ಶಾ, ನೇಪಾಳದ ಸಂಸದೀಯ ಇತಿಹಾಸದಲ್ಲಿ ಉನ್ನತ ಹುದ್ದೆ ಅಲಂಕರಿಸಲಿರುವ ಅತ್ಯಂತ ಕಿರಿಯ ವ್ಯಕ್ತಿ ಆಗಲಿದ್ದಾರೆ.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಫೈನಲ್ ಪಂದ್ಯದಲ್ಲಿ ಪ್ರಶಸ್ತಿಗಾಗಿ ಭಾರತ ಹಾಗೂ ನ್ಯೂಜಿಲೆಂಡ್ ತಂಡಗಳು ಸೆಣಸಲಿವೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಸೂರ್ಯಕುಮಾರ್ ಯಾದವ್ ನೇತೃತ್ವದ ಹಾಲಿ ಚಾಂಪಿಯನ್ ಭಾರತ ತಂಡ, ಸೆಮಿಫೈನಲ್‌ನಲ್ಲಿ ಇಂಗ್ಲೆಂಡ್ ವಿರುದ್ಧ ೭ ರನ್‌ಗಳ ರೋಚಕ ಜಯ ಸಾಧಿಸಿ, ಫೈನಲ್ ತಲುಪಿದೆ.

ಭಾರತ ತಂಡ, ಈ ಫೈನಲ್ ಪಂದ್ಯದಲ್ಲಿ ಗೆಲುವು ಸಾಧಿಸಿದರೆ, ಸತತ ಎರಡನೇ ಬಾರಿಗೆ ಐಸಿಸಿ ಟಿ-೨೦ ವಿಶ್ವಕಪ್ ಜಯಿಸಿದ ಮೊದಲ ತಂಡವಾಗಿ ಹೊರಹೊಮ್ಮಲಿದೆ.

<><><><>

ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನ ಪುರುಷರ ಸಿಂಗಲ್ಸ್ ಫೈನಲ್ ಪಂದ್ಯದಲ್ಲಿ ಇಂದು ಭಾರತದ ಲಕ್ಷ್ಯ ಸೇನ್, ಚೈನೀಸ್ ತೈಪೆಯ ಲಿನ್ ಚುನ್-ಯಿ ಅವರನ್ನು ಎದುರಿಸಲಿದ್ದಾರೆ. ಪಂದ್ಯ ಸಂಜೆ ೫ ಗಂಟೆಗೆ ಆರಂಭವಾಗಲಿದೆ. ಈ ಪಂದ್ಯದಲ್ಲಿ ಲಕ್ಷ್ಯಸೇನ್ ಜಯಗಳಿಸಿದರೆ, ೨೫ ವರ್ಷಗಳ ಬಳಿಕ ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಪ್ರಶಸ್ತಿ ಮುಡಿಗೇರಿಸಿಕೊಂಡತಾಗುತ್ತದೆ. ಈವರೆಗೆ, ಇಬ್ಬರು ಭಾರತೀಯರು ಈ ಸಾಧನೆ ಮಾಡಿದ್ದಾರೆ. ೧೯೮೦ ರಲ್ಲಿ ಪ್ರಕಾಶ್ ಪಡುಕೋಣೆ ಮತ್ತು ೨೦೦೧ ರಲ್ಲಿ ಪುಲ್ಲೇಲ ಗೋಪಿಚಂದ್. ೨೦೨೨ ರಲ್ಲಿ ರನ್ನರ್ ಅಪ್ ಸ್ಥಾನ ಪಡೆದ ನಂತರ ಲಕ್ಷ್ಯಸೇನ್ ಅವರ ಎರಡನೇ ಆಲ್ ಇಂಗ್ಲೆಂಡ್ ಫೈನಲ್ ಪಂದ್ಯ ಇದಾಗಿದೆ.

<><><><>

ಪಶ್ಚಿಮ ಏಷ್ಯಾ ಸಂಘರ್ಷದ ಹಿನ್ನೆಲೆಯಲ್ಲಿ ಇದೇ ೨೫ ರಿಂದ ೨೭ ರವರೆಗೆ ಕತಾರ್‌ನ ದೋಹಾದಲ್ಲಿ ನಡೆಯಬೇಕಿದ್ದ ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ-ಐಸಿಸಿ ಯ ಮೂರು ದಿನಗಳ

ಸಭೆಯನ್ನು ಮುಂದೂಡಲಾಗಿದೆ. ಸಭೆಯ ಮುಂದಿನ ದಿನಾಂಕವನ್ನು ಇನ್ನೂ ನಿಗದಿಯಾಗಿಲ್ಲವಾದರೂ, ಏಪ್ರಿಲ್‌ನಲ್ಲಿ ಸಭೆ ಮತ್ತೆ ಸೇರುವ ನಿರೀಕ್ಷೆಯಿದೆ. ಈ ಸಭೆಯಲ್ಲಿ ಐಸಿಸಿ ಮಂಡಳಿ ನಿರ್ದೇಶಕರು, ಮುಖ್ಯ ಕಾರ್ಯನಿರ್ವಾಹಕರು, ಸಮಿತಿ ಸದಸ್ಯರು ಮತ್ತು ಹಿರಿಯ ನಾಯಕತ್ವ ಭಾಗವಹಿಸುವ ನಿರೀಕ್ಷೆಯಿತ್ತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>